1	2	3	4
28	Shimoga	7125	2 86
29	Tumkur	4603	2 06
30	Udupi	1554	1 03
31	Uttara Kannada	15303	7 49
32	Yadgir	27249	13 75
	Total	405907	5 15

ಬೈಲಹೊಂಗಲ ತಾಲ್ಲೂಕಿನ ಸಂಗೊಳ್ಳಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣಗೂಡೆ ಹಾಗೂ ಸಿಬ್ಬಂದಿ ವಸತಿ ಗೃಹ ನಿರ್ಮಾಣ

143 (33) ಶ್ರೀ ಕೌಜಲಗಿ ಮಾಹಂತೇಶ್ ಶಿವಾನಂದ (ಬೈಲಹೊಂಗಲ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಸಂಗೊಳ್ಳಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿಗೆ ವಸತಿ ಗೃಹಗಳು ಇಲ್ಲದೆ ಇರುವುದರಿಂದ ತೊಂದರೆಯಾಗುತ್ತಿರುವುದು ನಿಜವೇ

ಆ) ಹಾಗಿದ್ದಲ್ಲಿ, ಕೂಡಲೇ ವಸತಿಗೃಹ ಕಟ್ಟಲು ಕ್ರಮ ಕೈಗೊಳ್ಳಲಾಗುವುದೇ

ಇ) ಈ ಪ್ರಾಥಮಿಕ ಆರೋಗ್ಯ ಕೇಂದ್ರದ ಸುತ್ತಲೂ ಕಾಂಪೌಂಡ್ ಗೋಡೆ ಇಲ್ಲದೆ ಇರುವುದರಿಂದ ಸರ್ಕಾರದ ಆಸ್ತಿಯು ಅತಿಕ್ರಮಣವಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ

ಈ) ಹಾಗಿದ್ದಲ್ಲಿ, ಆಸ್ತಿ ಕಾಪಾಡಲು ಆರೋಗ್ಯ ಕೇಂದ್ರದ ಸುತ್ತಲೂ ಆವರಣ ಗೋಡೆ ಕಟ್ಟಲು ಕೂಡಲೇ ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಹೌದು

ಆ) ಅನುದಾನದ ಲಭ್ಯತೆಯ ಮೇರೆಗೆ ಕ್ರಮ ಕೈಗೊಳ್ಳಲಾಗುವುದು

ಇ) ಹೌದು ಈ ಬಗ್ಗೆ ನಿಗವಹಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಲಾಗಿದೆ

ಈ) ಅನುದಾನದ ಲಭ್ಯತೆಯ ಮೇರೆಗೆ ಕ್ರಮ ಕೈಗೊಳ್ಳಲಾಗುವುದು

ಖಾಸಗಿಯವರಿಗೆ ಪ್ರಾಥಮಿಕ ಆರೋಗ್ಯ ಕೇಂದ್ರಗಳ ನಿರ್ವಹಣೆಯನ್ನು ವಹಿಸಿ ಕೊಡುವುದು

144 (34) ಶ್ರೀ ಕೌಜಲಗಿ ಮಾಹಂತೇಶ್ ಶಿವಾನಂದ (ಬೈಲಹೊಂಗಲ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಖಾಸಗಿಯವರಿಗೆ ವಹಿಸಿಕೊಡುವ ಸಂಗತಿ ಸರ್ಕಾರದ ಮುಂದೆ ಇದೆಯೇ?

ಆ) ಹಾಗಿದ್ದಲ್ಲಿ ಈಗ ಯಾವುದಾದರೂ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಖಾಸಗಿಯವರಿಗೆ ನಡೆಸಲು ಕೊಡಲಾಗಿದೆಯೇ

ಇ) ಖಾಸಗಿಯವರಿಗೆ ಪ್ರಾಥಮಿಕ ಆರೋಗ್ಯ ಕೆಂದ್ರಗಳನ್ನು ನಡೆಸಲು ಕೊಡುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುವ ಸಂಗತಿ ನಿಜವೇ

ಈ) ಒಂದು ವೇಳೆ ಖಾಸಗಿಯವರಿಗೆ ಪ್ರಾಥಮಿಕ ಆರೋಗ್ಯ ಕೇಂದ್ರ ನಡೆಸಲು ಕೊಡಬೇಕೆಂದಲ್ಲಿ ಯಾವ ಷರತ್ತುಗಳ ಮೇಲೆ ಕೊಡಲಾಗುವುದು

ಇ) ಬೆಳಗಾವಿ ಜಿಲ್ಲೆ, ಬೈಲಹೊಂಗಲ ತಾಲ್ಲೂಕಿನ ನೇಸರಗಿ ಗ್ರಾಮದ ಹೆರಿಗೆ ಆಸ್ಪತ್ರೆಯನ್ನು ಕೆ ಎಲ್ ಇ ಸಂಸ್ಥೆಯವರಿಗೆ ನಡೆಸಲು ಕೊಡಲಾಗುವುದೇ?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಇದೆ

ಆ) 30 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಖಾಸಗಿಯವರಿಗೆ ನಡೆಸಲು ಕೊಡಲಾಗಿದೆ

ಇ) ಇಲ್ಲ

ಈ) ಈ ಕೆಳಕಂಡ ಷರತ್ತುಗಳನ್ನು ವಿಧಿಸಿದೆ

1 ಸದರಿ ಸಂಸ್ಥೆಯ ಸೊಸೈಟಿ ಆಕ್ಟ್ ಪ್ರಕಾರ ನೋಂದಾಯಿಸಿಕೊಂಡಿರಬೇಕು ಹಾಗೂ ಹೆಸರಾಂತ ಸಂಸ್ಥೆಯಾಗಿರಬೇಕು

2 ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಅವರದ್ದೇ ಸಿಬ್ಬಂದಿ ನೇಮಿಸಿಕೊಳ್ಳಬಹುದು ಅಥವಾ ಇಲಾಖೆಯ ಸಿಬ್ಬಂದಿಯನ್ನು ನಿಯೋಜನೆ ಇಟ್ಟುಕೊಳ್ಳಬಹುದು

3 ಸಿಬ್ಬಂದಿಗೆ ಸಂಬಳದ ಶೇ 75 ರಷ್ಟನ್ನು ಮಾತ್ರ ಸರ್ಕಾರದ ವತಿಯಿಂದ ಪಾವತಿ ಮಾಡಲಾಗುವುದು

4 ಪ್ರಸ್ತಾವನೆಗಳು ಆಯಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನ್ವಾಹಕ ಅಧಿಕಾರಿಗಳ ಮುಖಾಂತರ ಬರಬೇಕು

ಉ) ಇಲ್ಲ

ಶಿಕ್ಷಕರ ಹುದ್ದೆಗಳ ನೇಮಕಾತಿ

145 (35) ಶ್ರೀ ಕೌಜಲಗಿ ಮಾಹಂತೇಶ್ ಶಿವಾನಂದ (ಬೈಲಹೊಂಗಲ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಷ್ಟು ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳು ಖಾಲಿ ಇರುತ್ತವೆ (ಜಿಲ್ಲಾವಾರು ಮಾಹಿತಿ ನೀಡುವುದು)

ಆ) ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆ ಖಾಲಿ ಇರುತ್ತವೆ, (ತಾಲ್ಲೂಕುವಾರು ಮಾಹಿತಿ ನೀಡುವುದು)

ಇ) ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕುಗಳಲ್ಲಿ ಖಾಲಿ ಇರುವ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳನ್ನು ತುಂಬಲು ಯಾವ ಕ್ರಮ ಕೈಗೊಳ್ಳಲಾಗಿದೆ?

ಪ್ರೋ॥ ಬಿ ಕೆ ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು)

ಅ) ರಾಜ್ಯದಲ್ಲಿ ಒಟ್ಟು 6555 ಖಾಲಿ ಹುದ್ದೆಗಳಿರುತ್ತವೆ ಜಿಲ್ಲಾವಾರು ಮಾಹಿತಿ ಪಟ್ಟಿ ಲಗತ್ತಿಸಿದೆ